ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 ಸಂಚಿಕೆ: 139 ರಾಯಚೂರು 10-11-2026 ಮಂಗಳವಾರ ಪುಟ : 04 ಬೆಲೆ: ₹ 2.00

Vol: 04 Issue: 139 Raichur 10-11-2026 Tuesday Page: 04 Price: ₹ 2.00

Postal Reg No.: RCR/L/RNP/95/2025-27

tungabimba@gmail.com

ಸಂಪಾದಕರು : ಗುರುರಾಜ ಕೆ

Editor: Gururaja K 98863 85685

ದೀಪಾವಳಿ ಹಬ್ಬದ ಶುಭಾಶಯಗಳು!



ಗಾಣಗಾಪುರ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ₹250 ಕೋಟಿ ಮಾಸ್ಟರ್ ಪ್ಲಾನ್: ಪ್ರಿಯಾಂಕ್ ಖರ್ಗೆ



ಕಲಬುರಗಿ: ಕಲ್ಯಾಣ ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ಗಾಣಗಾಪುರವನ್ನು ಸುಸಜ್ಜಿತ ಧಾರ್ಮಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ₹250 ಕೋಟಿ ವೆಚ್ಚದ ಸಮಗ್ರ ಮಾಸ್ಟರ್ ಪ್ಲ್ಯಾನ್ ರೂಪಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಯೋಜನೆಯ ಮೊದಲ ಹಂತದಲ್ಲಿ ₹50 ಕೋಟಿ ವೆಚ್ಚದ ಆರು ಪ್ರಮುಖ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಇದಕ್ಕಾಗಿ ವಿಸ್ತೃತ ಯೋಜನಾ ವರದಿ (ಡಿಪಿಆ)ರ್ ಸಿದ್ಧಪಡಿಸಲಾಗಿದ್ದು, ಸಚಿವ ಸಂಪುಟದ ಅನುಮೋದನೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಶೀಘ್ರದಲ್ಲೇ ಕಾಮಗಾರಿಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದ್ದಾರೆ.

ಮೊದಲ ಹಂತದ ಯೋಜನೆಯಡಿ ₹17.12 ಕೋಟಿ ವೆಚ್ಚದಲ್ಲಿ ಸಂಗಮ ಘಾಟ್ ಅಭಿವೃದ್ಧಿ, ₹12.50 ಕೋಟಿ ವೆಚ್ಚದಲ್ಲಿ ಪಾಪವಿನಾಶ ತೀರ್ಥ ಅಭಿವೃದ್ಧಿ, ₹6.50 ಕೋಟಿ ವೆಚ್ಚದಲ್ಲಿ ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ಪ್ರೊಮೆನೇಡ್ ಮಾರ್ಗ ನಿರ್ಮಾಣ, ₹9.10 ಕೋಟಿ ವೆಚ್ಚದಲ್ಲಿ ಪಾರ್ಕಿಂಗ್ ಮತ್ತು ಟ್ರಾನ್ಸಿಟ್ ವ್ಯವಸ್ಥೆ, ₹52 ಲಕ್ಷ ವೆಚ್ಚದಲ್ಲಿ ಬಸ್ ನಿಲ್ದಾಣದಿಂದ ದೇವಸ್ಥಾನಕ್ಕೆ ಪಾದಚಾರಿ ಮಾರ್ಗ ಹಾಗೂ ₹4.25 ಕೋಟಿ ವೆಚ್ಚದಲ್ಲಿ ದೇವಸ್ಥಾನ ಸಂಕೀರ್ಣದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಯೋಜಿಸಲಾಗಿದೆ.

ಸಂಗಮ ಘಾಟ್ ಅಭಿವೃದ್ಧಿಯ ಭಾಗವಾಗಿ 40 ವಾಣಿಜ್ಯ ಮಳಿಗೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಪಾಪವಿನಾಶ ತೀರ್ಥದಲ್ಲಿ ಫ್ಲೋಟಿಂಗ್ ಜೆಟ್ಟಿ ಹಾಗೂ ಭಕ್ತರಿಗೆ ಸುರಕ್ಷಿತ ಸ್ನಾನದ ವ್ಯವಸ್ಥೆ ಕಲ್ಪಿಸಲಾಗುವುದು. ದೇವಸ್ಥಾನಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿ 30 ಅಂಗಡಿಗಳು, ಮಾಹಿತಿ ಕೇಂದ್ರ ಹಾಗೂ ವಿದ್ಯುತ್ ದೀಪಾಲಂಕಾರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಸಚಿವರು ವಿವರಿಸಿದ್ದಾರೆ.

ಕ್ಷೇತ್ರಕ್ಕೆ ಆಗಮಿಸುವ ಭಕ್ತರು ಹಾಗೂ ಪ್ರವಾಸಿಗರ ಅನುಕೂಲಕ್ಕಾಗಿ ಉದ್ಯಾನವನ, ಸಾರ್ವಜನಿಕ ಶೌಚಾಲಯಗಳು, ವಿಶ್ರಾಂತಿ ಸ್ಥಳಗಳು ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲು ಯೋಜಿಸಲಾಗಿದೆ. ವಿಶೇಷವಾಗಿ ಅಂಗವಿಕಲರಿಗೆ ಅನುಕೂಲಕರ ಪ್ರವೇಶ ವ್ಯವಸ್ಥೆ ಹಾಗೂ ಭಕ್ತರ ದಟ್ಟಣೆಯನ್ನು ನಿಯಂತ್ರಿಸಲು ಪ್ರತ್ಯೇಕ ದರ್ಶನ ಪ್ರವೇಶ ಮತ್ತು ನಿರ್ಗಮನ ಮಾರ್ಗಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ವಾಹನಗಳ ನಿಲುಗಡೆ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ 860 ಕಾರುಗಳು ಹಾಗೂ 500 ದ್ವಿಚಕ್ರ ವಾಹನಗಳನ್ನು ನಿಲ್ಲಿಸುವ ಸಾಮರ್ಥ್ಯದ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ.

ಗಾಣಗಾಪುರ ಕ್ಷೇತ್ರಕ್ಕೆ ಪ್ರತಿವರ್ಷ ವಿವಿಧ ರಾಜ್ಯಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದು, ಅವರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ. ನದಿ ತೀರದ ಸೌಂದರ್ಯೀಕರಣ, ಆಧುನಿಕ ಮೂಲಸೌಕರ್ಯಗಳ ನಿರ್ಮಾಣ ಹಾಗೂ ಯಾತ್ರಿಕರ ಅನುಕೂಲಕ್ಕೆ ಆದ್ಯತೆ ನೀಡುವ ಮೂಲಕ ಕ್ಷೇತ್ರದ ಧಾರ್ಮಿಕ ಮತ್ತು ಪ್ರವಾಸೋದ್ಯಮ ಮಹತ್ವವನ್ನು ಮತ್ತಷ್ಟು ಹೆಚ್ಚಿಸಲು ಯೋಜಿಸಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಮಹತ್ವಾಕಾಂಕ್ಷೆಯ ಯೋಜನೆ ಅನುಷ್ಠಾನಗೊಂಡರೆ ಗಾಣಗಾಪುರಕ್ಕೆ ಆಗಮಿಸುವ ಭಕ್ತರು ಮತ್ತು ಪ್ರವಾಸಿಗರಿಗೆ ಹೆಚ್ಚಿನ ಅನುಕೂಲವಾಗುವುದರ ಜೊತೆಗೆ ಸ್ಥಳೀಯ ವ್ಯಾಪಾರ, ಉದ್ಯೋಗಾವಕಾಶಗಳು ಹಾಗೂ ಕಲಬುರಗಿ ಜಿಲ್ಲೆಯ ಆರ್ಥಿಕ ಚಟುವಟಿಕೆಗಳಿಗೂ ಉತ್ತೇಜನ ದೊರೆಯಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.





ಜಿಲ್ಲಾಡಳಿತದಿಂದ ನವೆಂಬರ್ 11ರಂದು ವೀರರಾಣಿ ಒನಕೆ ಓಬವ್ವ ಜಯಂತಿ

ರಾಯಚೂರು ನ. 09 (ಕರ್ನಾಟಕ ವಾರ್ತೆ): ರಾಯಚೂರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನವೆಂಬರ್ 11ರ ಬೆಳಿಗ್ಗೆ 11ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಉದ್ಘಾಟನೆ ನೆರವೇರಿಸುವರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ಎಸ್.ತಂಗಡಗಿ, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್ ಅವರು ಘನ ಉಪಸ್ಥಿತಿ ವಹಿಸುವರು.

ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎನ್.ಎಸ್.ಬೋಸರಾಜು, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಬಾಗಿಯಾಗಲಿದ್ದಾರೆ.

ವೀರರಾಣಿ ಒನಕೆ ಓಬವ್ವ ಜಯಂತಿ ಕುರಿತು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕನ್ನಡ ಅಧ್ಯಯನ ವಿಭಾಗದ ಸಂಯೋಜಕರಾದ ಡಾ.ಶರಣಪ್ಪ ಚಲವಾದಿ ಅವರು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆರೋಗ್ಯ ಇಲಾಖೆಯಿಂದ ವಾಹನ ಒದಗಿಸಲು ಅರ್ಜಿ ಆಹ್ವಾನ

ರಾಯಚೂರು ನ. 09 (ಕರ್ನಾಟಕ ವಾರ್ತೆ): ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯದ ರಾಷ್ಟಿಯ ಆರೋಗ್ಯ ಅಭಿಯಾನದ ರಾಷ್ಟಿಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಒಂದು ವರ್ಷದ ಅವಧಿಗೆ ಬಾಡಿಗೆ ಆಧಾರದ ಮೇಲೆ ವಾಹನ ಒದಗಿಸಲು ಅರ್ಹ ಹಾಗೂ ಆಸಕ್ತ ಸಂಸ್ಥೆಗಳು ಅಥವಾ ಸರಬರಾಜುದಾರರಿಂದ ಅರ್ಜಿ ಅಹ್ವಾನಿಸಲಾಗಿದೆ.

ರಾಷ್ಟಿಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಆರ್.ಬಿ.ಎಸ್.ಕೆ ತಂಡಗಳಿಗೆ ತಲಾ ಒಂದರತೆ ರಾಯಚೂರು ತಾಲ್ಲೂಕಿಗೆ 4, ದೇವದುರ್ಗ ತಾಲೂಕಿಗೆ 2, ಮಾನವಿ ತಾಲೂಕಿಗೆ 2, ಲಿಂಗಸೂಗುರು ತಾಲೂಕಿಗೆ 2 ಹಾಗೂ ಸಿಂಧನೂರು ತಾಲೂಕಿಗೆ 2 ವಾಹನಗಳು ಸೇರಿದಂತೆ 12 ವಾಹನಗಳು ಹಾಗೂ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಘಟಕಗಳಿಗೆ 4 ವಾಹನಗಳು ಚಾಲಕರೊಂದಿಗೆ ಒಟ್ಟು 16 ವಾಹನಗಳು

ಹಳದಿ ಬೋರ್ಡನ ಟಾಟಾ ಇಂಡಿಗೋ/ಇಡಿಕಾ ವಿಸ್ಟಾ/ಜೆಸ್ಟ್ /ಬೊಲೆರೊ/ಟಾಟಾ ಸುಮೋ/ವೆರಿಟೊ/ಸ್ವಿಫ್ಟ್ ಡಿಸೈರ್ ಟೂರ್/ಎರ್ಟಿಗಾ (ಅಥವಾ ಇದೇ ರೀತಿಯ ವಾಹನಗಳು) ಮಾದರಿಯ ಎಸಿ ಟ್ಯಾಕ್ಸಿ ವಾಹನ ಚಾಲಕನೊಂದಿಗೆ ತಿಂಗಳಿಗೆ ಗರಿಷ್ಠ 2500ಕಿ.ಮೀ. ವರೆಗೆ ಬಳಸಲು ಲಭ್ಯವಿರಬೇಕು. 2022 ಮತ್ತು ತದನಂತರದ ಮಾದರಿಗಳು ಆಗಿರಬೇಕು.

ಆಸಕ್ತರು ನವೆಂಬರ್ 14ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ https://kppp.karnataka.gov.in ಹಾಗೂ ರಾಯಚೂರು ಜಿಲ್ಲಾ ಆರೋಗ್ಯ ಇಲಾಖೆಯ ಜಿಲ್ಲಾ ಯೋಜನಾ ನಿರ್ವಹಣಾ ಘಟಕಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

ರಾಯಚೂರು ನ. 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮವನ್ನು ಹಾಗೂ ತರಬೇತಿಗಳನ್ನು ಮೇಲುಸ್ತುವಾರಿ ಮಾಡಲು ಗೌರವಧನದ ಆಧಾರದ ಮೇಲೆ ತಾತ್ಕಾಲಿಕ ಸೇವೆಗೆ ಇಬ್ಬರು ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮಾರ್ಗಸೂಚಿಯಲ್ಲಿ ವಿಧಿಸಿರುವ ಷರತ್ತುಗಳನ್ನು ಒಳಪಟ್ಟು ಸದರಿ ಎರಡು ಹುದ್ದೆಗಳಿಗೆ ಮಾತ್ರ ತಾತ್ಕಾಲಿಕ ಸೇವೆ ಆಧಾರದ ಮೇಲೆ ನೇಮಕಾತಿ ಮಾಡಲಾಗುವುದು.

ವಿದ್ಯಾರ್ಹತೆ: ಎಂ.ಎ. ಸಮಾಜ ಶಾಸ್ತ್ರ ಅಥವಾ ಎಂ.ಎಸ್.ಡಬ್ಲ್ಯೂನಲ್ಲಿ ಬೋಧನಾ ಕ್ಷೇತ್ರ ಅಥವಾ ಸ್ವಯಂ ಸೇವಾ ಸಂಸ್ಥೆಗಳೊದಿಗೆ ಕನಿಷ್ಠ 04 ರಿಂದ 05 ವರ್ಷದ ಮೂಲ ಸೇವಾ ಪ್ರಮಾಣಪತ್ರ ಲಗತ್ತಿಸಬೇಕು. ಅರ್ಜಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿ ನವೆಂಬರ್ 25ರ ಸಂಜೆ 5.30ರೊಳಗಾಗಿ ಸಲ್ಲಿಸಬಹುದಾಗಿದೆ. ವಿಳಂಬವಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು ಅಥವಾ ಸಿ.ವಿನಯಕುಮಾರ್ ಮೊಬೈಲ್ ಸಂಖ್ಯೆ: 7411557434, ದೂರವಾಣಿ ಸಂಖ್ಯೆ:08532-2956466ಗೆ ಸಂಪರ್ಕ ಮಾಡಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾನೂನು ಅರಿವಿನಿಂದ ಉತ್ತಮ ನಾಗರಿಕರಾಗಲು ಸಾಧ್ಯ: ನ್ಯಾಯಾಧೀಶ ಆನಂದ ಹೆಚ್. ಕೊಣ್ಣೂರು



ಮಾನ್ವಿ: ಪ್ರತಿಯೊಬ್ಬ ವ್ಯಕ್ತಿಯ ಜೀವನದಲ್ಲಿ ಹುಟ್ಟಿನಿಂದ ಸಾವಿನವರೆಗೂ ಕಾನೂನಿನ ಅಗತ್ಯವಿದ್ದು, ಸಂವಿಧಾನ ನೀಡಿರುವ ಹಕ್ಕುಗಳು ಹಾಗೂ ಕಾನೂನುಗಳ ಕುರಿತು ಅರಿವು ಹೊಂದಿದಾಗ ಮಾತ್ರ ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬದುಕಲು ಸಾಧ್ಯ ಎಂದು ಮಾನ್ವಿ ಜೆಎಂಎಫ್‌ಸಿ ಹಾಗೂ ಸಿವಿಲ್ ನ್ಯಾಯಾಲಯದ ನ್ಯಾಯಾಧೀಶ ಆನಂದ ಹೆಚ್. ಕೊಣ್ಣೂರು ಹೇಳಿದರು.

ತಾಲೂಕಿನ ಮದ್ಲಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಸಭಾಂಗಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ ಹಾಗೂ ಶಿಕ್ಷಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ದಿನದ ಅಂಗವಾಗಿ ಆಯೋಜಿಸಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತೀಯ ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕುಗಳನ್ನು ಕಲ್ಪಿಸಿದ್ದು, ಅವುಗಳ ರಕ್ಷಣೆಗಾಗಿ ವಿವಿಧ ಕಾನೂನುಗಳನ್ನು ರೂಪಿಸಲಾಗಿದೆ. ಕಾನೂನಿನ ಮುಂದೆ ಎಲ್ಲರೂ ಸಮಾನರಾಗಿದ್ದು, ಕಾನೂನು ಉಲ್ಲಂಘಿಸುವವರು ಶಿಕ್ಷೆಗೆ ಒಳಪಡಬೇಕಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಹಕ್ಕುಗಳು ಮತ್ತು ಕರ್ತವ್ಯಗಳ ಕುರಿತು ತಿಳಿದುಕೊಳ್ಳುವುದು ಅಗತ್ಯವಾಗಿದೆ ಎಂದರು.

ತಾಲೂಕು ಕಾನೂನು ಸೇವಾ ಸಮಿತಿಯು ಸಾರ್ವಜನಿಕರಿಗೆ ಉಚಿತವಾಗಿ ಕಾನೂನು ಮಾಹಿತಿ ಹಾಗೂ ಅಗತ್ಯ ನೆರವು ಒದಗಿಸುತ್ತಿದೆ. ಆರ್ಥಿಕವಾಗಿ ಹಿಂದುಳಿದವರು, ವಕೀಲರನ್ನು ನೇಮಿಸಿಕೊಳ್ಳಲು ಸಾಧ್ಯವಾಗದ ಅರ್ಹ ವ್ಯಕ್ತಿಗಳು, ಮಹಿಳೆಯರು ಹಾಗೂ ಮಕ್ಕಳು ಉಚಿತ ಕಾನೂನು ನೆರವು ಪಡೆಯಬಹುದು. ನ್ಯಾಯಾಲಯದಲ್ಲಿ ಪ್ರಕರಣಗಳನ್ನು ನಡೆಸಲು ಅರ್ಹ ಫಲಾನುಭವಿಗಳಿಗೆ ಉಚಿತವಾಗಿ ವಕೀಲರನ್ನು ನೇಮಿಸುವ ವ್ಯವಸ್ಥೆಯೂ ಇದೆ ಎಂದು ತಿಳಿಸಿದರು.

ಪ್ರತಿಯೊಬ್ಬ ನಾಗರಿಕನಿಗೂ ಮೂಲಸೌಲಭ್ಯಗಳು, ಪೌಷ್ಟಿಕ ಆಹಾರ ಹಾಗೂ ಮಕ್ಕಳಿಗೆ ಶಿಕ್ಷಣ ದೊರೆಯುವುದು ಅತ್ಯಂತ ಮುಖ್ಯವಾಗಿದೆ. ಜನನ ಮತ್ತು ಮರಣ ಪ್ರಮಾಣಪತ್ರಗಳು ಸೇರಿದಂತೆ ವಿವಿಧ ದಾಖಲೆಗಳಲ್ಲಿನ ದೋಷಗಳನ್ನು ಸರಿಪಡಿಸಿಕೊಳ್ಳಲು ಕಾನೂನುಬದ್ಧ ಮಾರ್ಗಗಳಿವೆ. ಅಗತ್ಯವಿದ್ದಲ್ಲಿ ನ್ಯಾಯಾಲಯದ ಮೊರೆ ಹೋಗಬಹುದು ಎಂದು ಹೇಳಿದರು.

ಅಪ್ರಾಪ್ತ ವಯಸ್ಸಿನ ಮಕ್ಕಳು ವಾಹನ ಚಾಲನೆ ಮಾಡುವುದು ಕಾನೂನುಬಾಹಿರವಾಗಿದ್ದು, ವಿದ್ಯಾರ್ಥಿಗಳು ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮಕ್ಕಳ ಸುರಕ್ಷತೆಗಾಗಿ ಜಾರಿಯಲ್ಲಿರುವ ಪೋಕ್ಸೋ ಕಾಯ್ದೆಯು ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಯಿಂದ ಮಕ್ಕಳನ್ನು ರಕ್ಷಿಸುವ ಪ್ರಮುಖ ಕಾನೂನಾಗಿದೆ. ವಿದ್ಯಾರ್ಥಿಗಳು ಇಂತಹ ಕಾನೂನುಗಳ ಬಗ್ಗೆ ಅರಿವು ಹೊಂದಿ ತಮ್ಮ ಸುರಕ್ಷತೆಯೊಂದಿಗೆ ಇತರರ ಹಕ್ಕುಗಳನ್ನೂ ಗೌರವಿಸಬೇಕು ಎಂದು ಸಲಹೆ ನೀಡಿದರು.

ನ್ಯಾಯಾಲಯಗಳಲ್ಲಿ ಬಾಕಿ ಇರುವ ರಾಜಿಗೆ ಅರ್ಹವಾದ ಪ್ರಕರಣಗಳನ್ನು ಪರಸ್ಪರ ಒಪ್ಪಂದದ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಲೋಕ ಅದಾಲತ್ ಉತ್ತಮ ವೇದಿಕೆಯಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಂಡು ವಿವಾದಗಳನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ವಕೀಲ ದತ್ತಾತ್ರೇಯ ಹಿರೇಕೊಟ್ನೆಕಲ್ ಅವರು ರಾಷ್ಟ್ರೀಯ ಕಾನೂನು ಸೇವೆಗಳ ದಿನದ ಮಹತ್ವ ಹಾಗೂ ಉಚಿತ ಕಾನೂನು ಅರಿವು ಮತ್ತು ನೆರವು ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ನ್ಯಾಯವಾದಿಗಳ ಸಂಘದ ಅಧ್ಯಕ್ಷ ರವಿಕುಮಾರ ಪಾಟೀಲ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ಡಿ., ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರು ನಾಗಪ್ಪ ಮಾಲಗಟ್ಟಿ, ನ್ಯಾಯವಾದಿಗಳ ಸಂಘದ ಪ್ರಧಾನ ಕಾರ್ಯದರ್ಶಿ ಯಲ್ಲಪ್ಪ ಬಾದರದಿನ್ನಿ, ಹಿರಿಯ ವಕೀಲ ಗುಮ್ಮ ಬಸವರಾಜ, ವಕೀಲರಾದ ಚನ್ನಬಸವನಾಯಕ ಬಲ್ಲಟ್ಟಗಿ, ರಾಘವೇಂದ್ರ, ಶಶಿಕಾಂತಯ್ಯ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಕಾರ್ಯನಿರ್ವಾಹಕ ಸಮಿತಿಯ ಖಾಯಂ ಆಹ್ವಾನಿತರಾಗಿ ರೇವಣಸಿದ್ದಪ್ಪ ಗರಡಿ ನೇಮಕ



ರಾಯಚೂರು: ಅಖಿಲ ಭಾರತ ವೀರಶೈವ ಮಹಾಸಭಾದ ರಾಯಚೂರು ಜಿಲ್ಲಾ ಕಾರ್ಯನಿರ್ವಾಹಕ ಸಮಿತಿಯ ಖಾಯಂ ಆಹ್ವಾನಿತರನ್ನಾಗಿ ರೇವಣಸಿದ್ದಪ್ಪ ಗರಡಿ ಅವರನ್ನು ನೇಮಕ ಮಾಡಿ ಜಿಲ್ಲಾ ಘಟಕದ ಅಧ್ಯಕ್ಷ ಚಂದ್ರಶೇಖರ್ ಮಿರ್ಜಾಪುರ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ವೀರಶೈವ ಮಹಾಸಭಾದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ಸಂಘಟನೆಯ ಕಾರ್ಯಚಟುವಟಿಕೆಗಳನ್ನು ವಿಸ್ತರಿಸುವುದು ಹಾಗೂ ಸಮಾಜದ ಹಿತಾಸಕ್ತಿಗೆ ಪೂರಕವಾಗಿ ಕಾರ್ಯನಿರ್ವಹಿಸುವ ಉದ್ದೇಶದಿಂದ ಈ ನೇಮಕಾತಿ ಮಾಡಲಾಗಿದೆ ಎಂದು ತಿಳಿಸಲಾಗಿದೆ.

ಮಹಾಸಭಾದ ಧ್ಯೇಯೋದ್ದೇಶಗಳಿಗೆ ಅನುಗುಣವಾಗಿ ಸಂಘಟನೆಯ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಅಭಿವೃದ್ಧಿಗೆ ಸಹಕಾರ ನೀಡುವಂತೆ ನೇಮಕಾತಿ ಆದೇಶದಲ್ಲಿ ಆಶಯ ವ್ಯಕ್ತಪಡಿಸಲಾಗಿದೆ.

ಸಂಘಟನೆಯ ಪದಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಮಹಾಸಭಾದ ಕಾರ್ಯಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರೇವಣಸಿದ್ದಪ್ಪ ಗರಡಿ ಅವರು ಕಾರ್ಯನಿರ್ವಹಿಸಲಿದ್ದಾರೆ ಎಂಬ ವಿಶ್ವಾಸವನ್ನು ಜಿಲ್ಲಾ ಘಟಕದ ಅಧ್ಯಕ್ಷರು ವ್ಯಕ್ತಪಡಿಸಿದ್ದಾರೆ.

ಈ ನೇಮಕಾತಿಯು ತಕ್ಷಣದಿಂದಲೇ ಜಾರಿಗೆ ಬರಲಿದ್ದು, ಮುಂದಿನ ಆದೇಶದವರೆಗೆ ಚಾಲ್ತಿಯಲ್ಲಿರುತ್ತದೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿದೆ.

ರೇವಣಸಿದ್ದಪ್ಪ ಗರಡಿ ಅವರು ಜಿಲ್ಲಾ ಕಾರ್ಯನಿರ್ವಾಹಕ ಸಮಿತಿಯ ಖಾಯಂ ಆಹ್ವಾನಿತರಾಗಿ ನೇಮಕಗೊಂಡಿರುವುದಕ್ಕೆ ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾ ಘಟಕದ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜದ ಮುಖಂಡರು ಅಭಿನಂದನೆ ಸಲ್ಲಿಸಿ, ಅವರ ಮುಂದಿನ ಸಂಘಟನಾತ್ಮಕ ಕಾರ್ಯಗಳಿಗೆ ಶುಭ ಹಾರೈಸಿದ್ದಾರೆ.

ಯರಮರಸ್ ಗ್ರಾಮದ ಮಲ್ಲಮ್ಮ ಗೌಡಸಾನಿ ಮಾಲಿಪಾಟೀಲ್ ನಿಧನ



ರಾಯಚೂರು: ತಾಲೂಕಿನ ಯರಮರಸ್ ಗ್ರಾಮದ ನಿವಾಸಿ, ಹಿರಿಯರಾದ ಮಲ್ಲಮ್ಮ ಗೌಡಸಾನಿ ಮಾಲಿಪಾಟೀಲ್ (75) ಅವರು ವಯೋಸಹಜ ಅನಾರೋಗ್ಯದಿಂದ ಸೋಮವಾರ ಬೆಳಗಿನ ಜಾವ ನಿಧನರಾದರು.

ಮೃತರು ದಿವಂಗತ ಬಸವರಾಜಪ್ಪ ಗೌಡ ಮಾಲಿಪಾಟೀಲ್ ಅವರ ಪತ್ನಿಯಾಗಿದ್ದು, ರಾಯಚೂರು ನಗರಸಭೆಯ ಮಾಜಿ ಸದಸ್ಯ ಈರಪ್ಪ ಗೌಡ ಮಾಲಿಪಾಟೀಲ್ ಅವರ ಅತ್ತಿಗೆ ಹಾಗೂ ಪ್ರಕಾಶ್ ಮಾಲಿಪಾಟೀಲ್ ಅವರ ತಾಯಿಯಾಗಿದ್ದರು.

ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಮೊಮ್ಮಕ್ಕಳು, ನಿವೃತ್ತ ಬ್ಯಾಂಕ್ ಮ್ಯಾನೇಜರ್ ಶಿವರಾಜಪ್ಪ ಗೌಡ ಮಾಲಿಪಾಟೀಲ್ ಸೇರಿದಂತೆ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.

ಮಲ್ಲಮ್ಮ ಅವರ ನಿಧನದಿಂದ ಕುಟುಂಬಸ್ಥರು ಹಾಗೂ ಬಂಧುಮಿತ್ರರಲ್ಲಿ ಶೋಕ ಮಡುಗಟ್ಟಿದೆ.

ಮೃತರ ಅಂತ್ಯಕ್ರಿಯೆಯನ್ನು ನವೆಂಬರ್ 10ರಂದು ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಯರಮರಸ್ ಗ್ರಾಮದಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶ್ರೀಮಠದ ನೂತನ ದಾಸೋಹ ಭವನ ನಿರ್ಮಾಣಕ್ಕೆ ನ.10ರಂದು ಭೂಮಿಪೂಜೆ



ಮಾನ್ವಿ, ಅ.9: ತಾಲೂಕಿನ ಚಿಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳ ನೇತೃತ್ವದಲ್ಲಿ ತಮಗೆಲ್ಲಿರೂ ಶ್ರೀಮಠದ ನೂತನ ದಾಸೋಹ ಭವನ ನಿರ್ಮಾಣಕ್ಕೆ ನವೆಂಬರ್ 10ರಂದು ಭೂಮಿಪೂಜೆ ನೆರವೇರಿಸಲು ನಿರ್ಧರಿಸಲಾಗಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಶ್ರೀಮಠಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ನೂತನ ದಾಸೋಹ ಭವನ ನಿರ್ಮಾಣಕ್ಕೆ ಮುಂದಾಗಿದ್ದು, ಈ ಹಿನ್ನೆಲೆಯಲ್ಲಿ ಭವನ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಲು ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ.

ದಾಸೋಹ ಭವನ ನಿರ್ಮಾಣ ಕಾರ್ಯಕ್ಕೆ ಅಗತ್ಯವಾದ ಸ್ಥಳವನ್ನು ಗುರುತಿಸಲಾಗಿದ್ದು, ನವೆಂಬರ್ 10ರಂದು ಭೂಮಿಪೂಜೆ ನೆರವೇರಿಸುವ ಮೂಲಕ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಅಧಿಕೃತ ಚಾಲನೆ ನೀಡಲಾಗುವುದು.

ಇದೇ ಸಂದರ್ಭದಲ್ಲಿ ಅಕ್ಟೋಬರ್ 31ರ ಶನಿವಾರ ಹಾಗೂ ನವೆಂಬರ್ 1ರ ಭಾನುವಾರ ಎರಡು ದಿನಗಳ ಕಾಲ ಶ್ರೀಮಠದಲ್ಲಿ ಸಂಪೂರ್ಣ ಹಳೆ ಕಟ್ಟಡವನ್ನು ತೆರವುಗೊಳಿಸುವ ಸೇವಾ ಕಾರ್ಯ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯದಲ್ಲಿ ಭಕ್ತರು ಹಾಗೂ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ಪಾಲ್ಗೊಂಡು ಸಹಕರಿಸುವಂತೆ ಶ್ರೀಮಠದ ವತಿಯಿಂದ ಮನವಿ ಮಾಡಲಾಗಿದೆ.

ಹಳೆಯ ಕಟ್ಟಡವನ್ನು ತೆರವುಗೊಳಿಸುವ ಸಂದರ್ಭದಲ್ಲಿ ಅಗತ್ಯವಾದ ವಾಹನಗಳು ಹಾಗೂ ಇತರ ಸೌಲಭ್ಯಗಳೊಂದಿಗೆ ಆಗಮಿಸಿ ಸೇವಾ ಕಾರ್ಯದಲ್ಲಿ ಭಾಗವಹಿಸುವಂತೆ ಭಕ್ತರಿಗೆ ಕರೆ ನೀಡಲಾಗಿದೆ.

ಶ್ರೀಮಠದ ಅಭಿವೃದ್ಧಿ ಹಾಗೂ ಭಕ್ತರ ಅನುಕೂಲಕ್ಕಾಗಿ ಕೈಗೊಂಡಿರುವ ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸಬೇಕು. ಅಕ್ಟೋಬರ್ 31 ಮತ್ತು ನವೆಂಬರ್ 1ರಂದು ನಡೆಯುವ ಸೇವಾ ಕಾರ್ಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ನೂತನ ದಾಸೋಹ ಭವನ ನಿರ್ಮಾಣಕ್ಕೆ ಸಹಕಾರ ನೀಡಬೇಕು ಎಂದು ಶ್ರೀ ಸದಾಶಿವ ಮಹಾಸ್ವಾಮಿಗಳು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

ನರಕ ಚತುರ್ದಶಿ ಸಂಭ್ರಮ: ಶ್ರೀ ರಾಯರ ಬೃಂದಾವನಕ್ಕೆ ತೈಲಾಭ್ಯಂಜನ ಸೇವೆ



ಮಂತ್ರಾಲಯ: ನರಕ ಚತುರ್ದಶಿ ಪ್ರಯುಕ್ತ ಮಂತ್ರಾಲಯದ ಪ್ರಸಿದ್ಧ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ಹಾಗೂ ಸಾಂಪ್ರದಾಯಿಕ ಧಾರ್ಮಿಕ ಆಚರಣೆಗಳು ಶ್ರದ್ಧಾಭಕ್ತಿಯಿಂದ ಜರುಗಿದವು. ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಸಾನ್ನಿಧ್ಯದಲ್ಲಿ ವಿವಿಧ ಪೂಜಾ ವಿಧಿವಿಧಾನಗಳು ನೆರವೇರಿದ್ದು, ಭಕ್ತರು ಭಕ್ತಿಭಾವದಿಂದ ಪಾಲ್ಗೊಂಡರು.

ನರಕ ಚತುರ್ದಶಿಯ ಅಂಗವಾಗಿ ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಮಠದ ಆರಾಧ್ಯ ದೈವ ಶ್ರೀ ಮೂಲರಾಮದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಕಾರ್ತಿಕ ಮಂಗಳಾರತಿ ಬೆಳಗಿದರು. ನಂತರ ಧಾರ್ಮಿಕ ಸಂಪ್ರದಾಯದಂತೆ ಗೋ ಪೂಜೆ ಹಾಗೂ ತುಳಸಿ ಪೂಜೆ ನೆರವೇರಿಸಿ ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸಿದರು.

ತದನಂತರ ಮಠದ ಆವರಣದಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿಗಳ ಪವಿತ್ರ ಮೂಲ ಬೃಂದಾವನ ಸೇರಿದಂತೆ ಇತರ ಯತಿಗಳ ಬೃಂದಾವನಗಳಿಗೆ ಶ್ರೀಗಳು ಶಾಸ್ತ್ರೋಕ್ತವಾಗಿ ತೈಲಾಭ್ಯಂಜನ ಸೇವೆ ಸಮರ್ಪಿಸಿದರು. ನರಕ ಚತುರ್ದಶಿಯ ವಿಶೇಷ ಆಚರಣೆಯ ಭಾಗವಾಗಿ ನೆರವೇರಿದ ಈ ಧಾರ್ಮಿಕ ವಿಧಿವಿಧಾನಗಳು ಮಠದ ಆಧ್ಯಾತ್ಮಿಕ ವಾತಾವರಣಕ್ಕೆ ಮತ್ತಷ್ಟು ಮೆರುಗು ನೀಡಿದವು.

ಇದರ ಮುಂದುವರಿದ ಭಾಗವಾಗಿ ಸಂಪ್ರದಾಯಬದ್ಧವಾಗಿ ನಾರೀಕೃತ ನೀರಾಜನಂ ಧಾರ್ಮಿಕ ವಿಧಿಯನ್ನು ನೆರವೇರಿಸಲಾಯಿತು. ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರು ಪೂಜಾ ಕಾರ್ಯಕ್ರಮಗಳ ಬಳಿಕ ನೆರೆದಿದ್ದ ಭಕ್ತರಿಗೆ ಅನುಗ್ರಹ ಸಂದೇಶ ನೀಡಿ, ನರಕ ಚತುರ್ದಶಿಯ ಪವಿತ್ರ ಸಂದರ್ಭದಲ್ಲಿ ಎಲ್ಲರಿಗೂ ಶುಭಾಶೀರ್ವಾದ ಮಾಡಿದರು.

ಶ್ರೀ ರಾಘವೇಂದ್ರ ಸ್ವಾಮಿಗಳ ಸನ್ನಿಧಿಯಲ್ಲಿ ನಡೆದ ವಿಶೇಷ ಪೂಜಾ ಕೈಂಕರ್ಯಗಳು, ಮಂಗಳಾರತಿ ಹಾಗೂ ಧಾರ್ಮಿಕ ಆಚರಣೆಗಳಲ್ಲಿ ಭಕ್ತರು ಪಾಲ್ಗೊಂಡು ಶ್ರೀ ರಾಯರ ಮತ್ತು ಶ್ರೀ ಮೂಲರಾಮದೇವರ ದರ್ಶನಾಶೀರ್ವಾದ ಪಡೆದರು. ಮಠದ ಆವರಣದಲ್ಲಿ ಭಕ್ತಿ, ಶ್ರದ್ಧೆ ಹಾಗೂ ಆಧ್ಯಾತ್ಮಿಕ ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

ದೇವಸೂಗೂರು ಹೋಬಳಿ ಅಂಬೇಡ್ಕರ್ ಸೇವಾ ಸಮಿತಿಗೆ ನೂತನ ಪದಾಧಿಕಾರಿಗಳ ಆಯ್ಕೆ



ರಾಯಚೂರು: ತಾಲೂಕಿನ ದೇವಸೂಗೂರು ಹೋಬಳಿ ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ಸಂಘಟನೆಯ ನೂತನ ಪದಾಧಿಕಾರಿಗಳ ಆಯ್ಕೆ ನವೆಂಬರ್ 7ರಂದು ಶಕ್ತಿನಗರದ ಕೃಷ್ಣ ಅತಿಥಿ ಗೃಹದಲ್ಲಿ ನಡೆಯಿತು.

ಸಂಘಟನೆಯ ಜಿಲ್ಲಾಧ್ಯಕ್ಷ ಬಸವರಾಜ ರೆಡ್ಡಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಸಂಚಾಲಕ ರಾಮಸ್ವಾಮಿ ಆರೋಲಿ, ತಾಲೂಕು ಅಧ್ಯಕ್ಷ ಸುರೇಶ್ ಪಿ. ಹಾಗೂ ಕೃಷ್ಣ ಘಂಟಿ ಅವರ ನೇತೃತ್ವದಲ್ಲಿ ಹೋಬಳಿ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಸಭೆಯಲ್ಲಿ ಮಾತನಾಡಿದ ಮುಖಂಡರು, ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ, ಮಾನವೀಯತೆ ಮತ್ತು ಸಾಮಾಜಿಕ ನ್ಯಾಯದ ಆದರ್ಶಗಳನ್ನು ಸಮಾಜದ ಪ್ರತಿಯೊಬ್ಬರಿಗೂ ತಲುಪಿಸುವ ಜವಾಬ್ದಾರಿ ಸಂಘಟನೆ ಮೇಲಿದೆ. ಸಂವಿಧಾನಬದ್ಧ ಹಕ್ಕುಗಳ ರಕ್ಷಣೆ, ಶೋಷಿತರ ಸಬಲೀಕರಣ ಹಾಗೂ ಶೈಕ್ಷಣಿಕ ಜಾಗೃತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ನೂತನ ಘಟಕದ ಗೌರವಾಧ್ಯಕ್ಷರಾಗಿ ಹರೀಶ್ ರೆಡ್ಡಿ, ಅಧ್ಯಕ್ಷರಾಗಿ ಸುರೇಶ್ ಪಾಣಿ, ಉಪಾಧ್ಯಕ್ಷರಾಗಿ ಪದ್ಮನಾಭಸ್ವಾಮಿ, ಸಂಚಾಲಕರಾಗಿ ಬಿ. ಸುನಿಲ್ ಕುಮ್ಹಾರ್, ಸಂಘಟನಾ ಅಧ್ಯಕ್ಷರಾಗಿ ಬಿ. ಅನಿಲ್ ಕುಮ್ಹಾರ್, ಉಸ್ತುವಾರಿ ಅಧ್ಯಕ್ಷರಾಗಿ ಚಿನ್ನ ಸೂರ್ಯ ಆಯ್ಕೆಯಾದರು.

ಪ್ರಧಾನ ಕಾರ್ಯದರ್ಶಿಯಾಗಿ ಸುರೇಂದ್ರ ಮಡಿವಾಳ, ಕಾರ್ಯದರ್ಶಿಯಾಗಿ ನಾಗರಾಜ್ ಎನ್., ಯುವ ಘಟಕದ ಅಧ್ಯಕ್ಷರಾಗಿ ನರಸಿಂಹ ಪಾಣಿ, ಸಂಘಟನಾ ಕಾರ್ಯದರ್ಶಿಯಾಗಿ ಶಿವಶಂರ್ಕ, ಖಜಾಂಚಿಯಾಗಿ ಸುರೇಶ್ ಎನ್. ಹಾಗೂ ಸಂಘಟನಾ ಸಲಹೆಗಾರರಾಗಿ ಹನುಮೇಶ್ ಅವರನ್ನು ಆಯ್ಕೆ ಮಾಡಲಾಯಿತು.

ದಲಿತರು, ಹಿಂದುಳಿದವರು ಹಾಗೂ ಶೋಷಿತ ಸಮುದಾಯಗಳ ಸಮಸ್ಯೆಗಳಿಗೆ ಸ್ಪಂದಿಸುವುದರೊಂದಿಗೆ ಸಾಮಾಜಿಕ ಅನ್ಯಾಯದ ವಿರುದ್ಧ ಸಂಘಟಿತ ಹೋರಾಟ ನಡೆಸಿ, ಹೋಬಳಿ ಮಟ್ಟದಲ್ಲಿ ಸಂಘಟನೆಯನ್ನು ಬಲಿಷ್ಠಗೊಳಿಸಲು ನೂತನ ಪದಾಧಿಕಾರಿಗಳು ಸಂಕಲ್ಪ ವ್ಯಕ್ತಪಡಿಸಿದರು.

ಚಂದ್ರಬಂಡಾದಲ್ಲಿ ನ.10ರಿಂದ ಶ್ರೀ ಬಂಡೆ ರಂಗನಾಥಸ್ವಾಮಿ ಜಾತ್ರಾ ಮಹೋತ್ಸವ: ಬಂಡೆ ಕಲ್ಲು ಎಳೆಯುವ ಎತ್ತುಗಳ ಸ್ಪರ್ಧೆ



ರಾಯಚೂರು: ತಾಲೂಕಿನ ಚಂದ್ರಬಂಡಾ ಗ್ರಾಮದ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಶ್ರೀ ಬಂಡೆ ರಂಗನಾಥಸ್ವಾಮಿ ದೇವಸ್ಥಾನದಲ್ಲಿ ದೀಪಾವಳಿ ಹಬ್ಬದ ಅಂಗವಾಗಿ ನವೆಂಬರ್ 10ರಿಂದ 12ರವರೆಗೆ ಮೂರು ದಿನಗಳ ಕಾಲ ಜಾತ್ರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಾತ್ರೆಯ ವಿಶೇಷ ಆಕರ್ಷಣೆಯಾಗಿ ರಾಜ್ಯ ಹಾಗೂ ರಾಷ್ಟ್ರಮಟ್ಟದ ಎತ್ತುಗಳಿಂದ ಬಂಡೆ ಕಲ್ಲು ಎಳೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಬುದಯ್ಯ ಸ್ವಾಮಿ ತಿಳಿಸಿದರು.

ನಗರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಚಂದ್ರಬಂಡಾ ಗ್ರಾಮದಲ್ಲಿ ಪ್ರತಿವರ್ಷ ದೀಪಾವಳಿ ಸಂದರ್ಭದಲ್ಲಿ ಶ್ರೀ ಬಂಡೆ ರಂಗನಾಥಸ್ವಾಮಿಯ ಜಾತ್ರೆಯನ್ನು ಸಾಂಪ್ರದಾಯಿಕವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಈ ವರ್ಷವೂ ಧಾರ್ಮಿಕ ವಿಧಿವಿಧಾನಗಳೊಂದಿಗೆ ಜಾತ್ರೆ ನಡೆಸಲು ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಗ್ರಾಮಸ್ಥರು ಸಿದ್ಧತೆ ಮಾಡಿಕೊಂಡಿದ್ದಾರೆ. ಮೂರು ದಿನಗಳ ಜಾತ್ರೆಯಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಜತೆಗೆ ಎತ್ತುಗಳ ಶಕ್ತಿ ಮತ್ತು ಸಾಮರ್ಥ್ಯ ಪ್ರದರ್ಶಿಸುವ ವಿಶಿಷ್ಟ ಸ್ಪರ್ಧೆಗಳು ನಡೆಯಲಿವೆ ಎಂದು ವಿವರಿಸಿದರು.

ನವೆಂಬರ್ 10ರಂದು ಮಂಗಳವಾರ ಸಂಜೆ 4 ಗಂಟೆಗೆ ಶ್ರೀ ಬಂಡೆ ರಂಗನಾಥಸ್ವಾಮಿಯ ಉಚ್ಚಾಯ ಕಾರ್ಯಕ್ರಮ ನಡೆಯಲಿದ್ದು, ಇದರೊಂದಿಗೆ ಜಾತ್ರಾ ಮಹೋತ್ಸವಕ್ಕೆ ಚಾಲನೆ ದೊರೆಯಲಿದೆ. ಮರುದಿನ ನವೆಂಬರ್ 11ರಂದು ಬುಧವಾರ ಬೆಳಿಗ್ಗೆ 9 ಗಂಟೆಯಿಂದ ಕರ್ನಾಟಕ ರಾಜ್ಯದ ಜನರಲ್ ಕೆಟಗರಿ ವಿಭಾಗದ ಎತ್ತುಗಳಿಗೆ 11 ಕ್ವಿಂಟಾಲ್ ತೂಕದ ಬಂಡೆ ಕಲ್ಲು ಎಳೆಯುವ ಸ್ಪರ್ಧೆ ಆಯೋಜಿಸಲಾಗಿದೆ.

ಈ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡುವ ಎತ್ತುಗಳ ಮಾಲೀಕರಿಗೆ ಪ್ರಥಮ ಬಹುಮಾನವಾಗಿ ₹30 ಸಾವಿರ, ದ್ವಿತೀಯ ₹20 ಸಾವಿರ, ತೃತೀಯ ₹10 ಸಾವಿರ, ನಾಲ್ಕನೇ ₹8 ಸಾವಿರ, ಐದನೇ ₹5 ಸಾವಿರ ಹಾಗೂ ಆರನೇ ಬಹುಮಾನವಾಗಿ ₹3 ಸಾವಿರ ನಗದು ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

ನವೆಂಬರ್ 12ರಂದು ಗುರುವಾರ ಬೆಳಿಗ್ಗೆ 9 ಗಂಟೆಗೆ ರಾಷ್ಟ್ರಮಟ್ಟದ ಒಂಗೋಲ್ ನ್ಯೂ ಕೆಟಗರಿ ವಿಭಾಗದ ಎತ್ತುಗಳಿಂದ 14 ಕ್ವಿಂಟಾಲ್ ತೂಕದ ಬಂಡೆ ಕಲ್ಲು ಎಳೆಯುವ ಸ್ಪರ್ಧೆ ನಡೆಯಲಿದೆ. ಈ ಸ್ಪರ್ಧೆಯಲ್ಲಿ ವಿವಿಧ ರಾಜ್ಯಗಳ ಎತ್ತುಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ವಿಜೇತರಿಗೆ ಪ್ರಥಮ ಬಹುಮಾನ ₹50 ಸಾವಿರ, ದ್ವಿತೀಯ ₹40 ಸಾವಿರ, ತೃತೀಯ ₹30 ಸಾವಿರ, ನಾಲ್ಕನೇ ₹20 ಸಾವಿರ, ಐದನೇ ₹10 ಸಾವಿರ, ಆರನೇ ₹8 ಸಾವಿರ, ಏಳನೇ ₹6 ಸಾವಿರ ಹಾಗೂ ಎಂಟನೇ ಬಹುಮಾನವಾಗಿ ₹5 ಸಾವಿರ ನಗದು ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಗ್ರಾಮೀಣ ಭಾಗದ ಸಾಂಪ್ರದಾಯಿಕ ಕ್ರೀಡೆಗಳಲ್ಲಿ ಒಂದಾದ ಎತ್ತುಗಳಿಂದ ಬಂಡೆ ಕಲ್ಲು ಎಳೆಯುವ ಸ್ಪರ್ಧೆಯು ಚಂದ್ರಬಂಡಾ ಜಾತ್ರೆಯ ಪ್ರಮುಖ ಆಕರ್ಷಣೆಯಾಗಿದೆ. ಈ ಸ್ಪರ್ಧೆಗಳನ್ನು ವೀಕ್ಷಿಸಲು ಸುತ್ತಮುತ್ತಲಿನ ಗ್ರಾಮಗಳು ಹಾಗೂ ವಿವಿಧ ಜಿಲ್ಲೆಗಳಿಂದ ರೈತರು, ಪಶುಪಾಲಕರು ಮತ್ತು ಸಾರ್ವಜನಿಕರು ಆಗಮಿಸುವ ನಿರೀಕ್ಷೆಯಿದೆ. ಎರಡೂ ವಿಭಾಗಗಳ ಸ್ಪರ್ಧೆಗಳಿಗೆ ಚಂದ್ರಬಂಡಾ ಗ್ರಾಮದ ದಾನಿಗಳು ಬಹುಮಾನಗಳ ಪ್ರಾಯೋಜಕತ್ವ ವಹಿಸಿಕೊಂಡಿದ್ದಾರೆ ಎಂದು ಹೇಳಿದರು.

ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರು, ಸ್ಪರ್ಧಾಳುಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ನವೆಂಬರ್ 11 ಮತ್ತು 12ರಂದು ಅನ್ನದಾಸೋಹ ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಜಾತ್ರೆಯನ್ನು ಶಾಂತಿಯುತವಾಗಿ ಹಾಗೂ ಯಶಸ್ವಿಯಾಗಿ ನೆರವೇರಿಸಲು ಗ್ರಾಮಸ್ಥರು ಮತ್ತು ದೇವಸ್ಥಾನದ ಭಕ್ತರು ಸಹಕಾರ ನೀಡುತ್ತಿದ್ದಾರೆ ಎಂದರು.

ಶ್ರೀ ಬಂಡೆ ರಂಗನಾಥಸ್ವಾಮಿಯ ಜಾತ್ರಾ ಮಹೋತ್ಸವದಲ್ಲಿ ರಾಯಚೂರು ಜಿಲ್ಲೆ ಸೇರಿದಂತೆ ವಿವಿಧ ಭಾಗಗಳ ಭಕ್ತರು, ರೈತರು ಹಾಗೂ ಎತ್ತುಗಳ ಸ್ಪರ್ಧೆಯ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕೈಜೋಡಿಸಬೇಕು ಎಂದು ಬುದಯ್ಯ ಸ್ವಾಮಿ ಮನವಿ ಮಾಡಿದರು.

ಜಾತ್ರೆ ಹಾಗೂ ಎತ್ತುಗಳ ಸ್ಪರ್ಧೆಗಳ ಕುರಿತು ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 8660975515 ಅಥವಾ 9740346454 ಸಂಪರ್ಕಿಸಬಹುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ರಾಜಯ್ಯ ಶೆಟ್ಟಿ ಹಾಗೂ ನರಸಿಂಗರಾವ್ ಕುಲಕರ್ಣಿ ಉಪಸ್ಥಿತರಿದ್ದರು.

ಸ್ವಾವಲಂಬಿ ಬದುಕಿಗೆ ಸಹಕಾರ ಸಂಘಗಳು ಪೂರಕವಾಗಲಿ: ಶಾಸಕಿ ಕರೆಮ್ಮ ಗೋಪಾಲಕೃಷ್ಣ



ದೇವದುರ್ಗ: ಸಹಕಾರ ಸಂಘಗಳು ಕೇವಲ ಸಾಲ ವಿತರಣೆಗೆ ಸೀಮಿತವಾಗದೆ, ಬಡವರು, ಸಣ್ಣ ವ್ಯಾಪಾರಿಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಅಭಿವೃದ್ಧಿಗೆ ನೆರವಾಗಬೇಕು. ಜನಸಾಮಾನ್ಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರ ಕ್ಷೇತ್ರ ಪ್ರಮುಖ ಪಾತ್ರ ವಹಿಸಬೇಕು ಎಂದು ಶಾಸಕಿ ಕರೆಮ್ಮ ಗೋಪಾಲಕೃಷ್ಣ ಹೇಳಿದರು.

ಪಟ್ಟಣದ ಶಾಂತಿನಗರದಲ್ಲಿ ಭಾನುವಾರ ಅರುಂಧತಿ ಸಹಕಾರ ಸಂಘದ ನೂತನ ಬ್ಯಾಂಕ್ ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಕ್ಷೇತ್ರದ ಸೇವೆಗಳನ್ನು ಮತ್ತಷ್ಟು ವಿಸ್ತರಿಸುವುದರೊಂದಿಗೆ ಸಮಾಜದ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಕಾರ್ಯನಿರ್ವಹಿಸುವುದು ಸಹಕಾರ ಸಂಘಗಳ ಪ್ರಮುಖ ಉದ್ದೇಶವಾಗಬೇಕು. ಆರ್ಥಿಕ ಸಂಕಷ್ಟದಲ್ಲಿರುವ ಕುಟುಂಬಗಳಿಗೆ ಅಗತ್ಯ ಸಾಲ ಸೌಲಭ್ಯ ಕಲ್ಪಿಸಿ, ಅವರ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆ ತರಲು ಬ್ಯಾಂಕ್‌ಗಳು ಮುಂದಾಗಬೇಕು ಎಂದು ತಿಳಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜನಸಾಮಾನ್ಯರ ಆರ್ಥಿಕ ಸಬಲೀಕರಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೊಳಿಸಿವೆ. ಅರ್ಹ ಫಲಾನುಭವಿಗಳು ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಬೇಕು. ವಿಶೇಷವಾಗಿ ಮಹಿಳೆಯರು ಹಾಗೂ ಸ್ವಸಹಾಯ ಸಂಘಗಳ ಸದಸ್ಯರಿಗೆ ಆರ್ಥಿಕ ನೆರವು ಒದಗಿಸುವ ಮೂಲಕ ಸ್ವಯಂ ಉದ್ಯೋಗಕ್ಕೆ ಉತ್ತೇಜನ ನೀಡಬೇಕು ಎಂದರು.

ಕಳೆದ ಮೂರು ವರ್ಷಗಳಲ್ಲಿ ಸ್ವಸಹಾಯ ಗುಂಪುಗಳಿಗೆ ವಿವಿಧ ಯೋಜನೆಗಳ ಮೂಲಕ ನೆರವು ದೊರೆತಿದ್ದು, ಅನೇಕರು ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರೆ. ಸಾಲ ವಿತರಿಸುವುದರ ಜೊತೆಗೆ ಸಕಾಲದಲ್ಲಿ ಮರುಪಾವತಿ ಮಾಡುವ ಕುರಿತು ಫಲಾನುಭವಿಗಳಲ್ಲಿ ಜಾಗೃತಿ ಮೂಡಿಸಬೇಕು. ಇದರಿಂದ ಸಹಕಾರ ಸಂಘಗಳ ಆರ್ಥಿಕ ಸ್ಥಿರತೆಯೂ ಹೆಚ್ಚಲಿದೆ ಎಂದು ಅಭಿಪ್ರಾಯಪಟ್ಟರು.

ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಅನೇಕ ಸಣ್ಣ ವ್ಯಾಪಾರಿಗಳು ಖಾಸಗಿ ವ್ಯಕ್ತಿಗಳಿಂದ ಸಾಲ ಪಡೆದು ವ್ಯಾಪಾರ ನಡೆಸುತ್ತಿದ್ದಾರೆ. ಹೆಚ್ಚಿನ ಬಡ್ಡಿದರದ ಸಾಲದಿಂದ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಇಂತಹ ಕುಟುಂಬಗಳಿಗೆ ಸಹಕಾರ ಬ್ಯಾಂಕ್‌ಗಳು ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಿದರೆ ಅವರ ಬದುಕಿಗೆ ದೊಡ್ಡ ಆಸರೆಯಾಗಲಿದೆ ಎಂದು ಹೇಳಿದರು.

ಸಣ್ಣಪುಟ್ಟ ವ್ಯಾಪಾರಿಗಳು, ಸ್ವಯಂ ಉದ್ಯೋಗಿಗಳು ಹಾಗೂ ದುಡಿಯುವ ವರ್ಗದ ಜನರಿಗೆ ಅಗತ್ಯ ಬಂಡವಾಳ ಒದಗಿಸಿ ಅವರ ಆರ್ಥಿಕ ಸ್ಥಿತಿಯನ್ನು ಸುಧಾರಿಸಿದಾಗ ಮಾತ್ರ ಸಹಕಾರ ಸಂಘಗಳ ಸ್ಥಾಪನೆಯ ಉದ್ದೇಶ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಮಾತನಾಡಿ, ಸಹಕಾರ ಬ್ಯಾಂಕ್‌ಗಳು ಸಣ್ಣ ವ್ಯಾಪಾರಿಗಳಲ್ಲಿ ಆತ್ಮವಿಶ್ವಾಸ ಮೂಡಿಸುವ ಕೆಲಸ ಮಾಡಬೇಕು. ಪ್ರತಿಯೊಂದು ವ್ಯಾಪಾರಕ್ಕೂ ಅದರದೇ ಆದ ಬಂಡವಾಳದ ಅಗತ್ಯವಿದ್ದು, ವ್ಯಾಪಾರಿಗಳ ಆರ್ಥಿಕ ಸಾಮರ್ಥ್ಯ ಹಾಗೂ ಉದ್ಯಮದ ಸ್ವರೂಪಕ್ಕೆ ಅನುಗುಣವಾಗಿ ಸಾಲ ಸೌಲಭ್ಯ ಕಲ್ಪಿಸಬೇಕು ಎಂದರು.

ರಾಜ್ಯ ಸರ್ಕಾರ ಬಡವರು ಹಾಗೂ ಆರ್ಥಿಕವಾಗಿ ಹಿಂದುಳಿದವರ ಅಭಿವೃದ್ಧಿಗಾಗಿ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ. ಸಾರ್ವಜನಿಕರು ಅವುಗಳ ಸದುಪಯೋಗ ಪಡೆದುಕೊಂಡು ತಮ್ಮ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಳ್ಳಬೇಕು. ಸಹಕಾರ ಸಂಘಗಳು ಸರ್ಕಾರದ ಯೋಜನೆಗಳು ಮತ್ತು ಜನಸಾಮಾನ್ಯರ ನಡುವೆ ಸಂಪರ್ಕ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯ ಬಸವರಾಜ ಪಾಟೀಲ್ ಇಟಗಿ, ಲಕ್ಷ್ಮಣ ಅಕ್ಕರಕಿ, ಅಯ್ಯಳಪ್ಪ, ರಮೇಶ ರಾಮನಾಳ, ಬಸವರಾಜ ಅಕ್ಕರಕಿ, ನಟರಾಜ ಅಕ್ಕರಕಿ ಸೇರಿದಂತೆ ಸಹಕಾರ ಸಂಘದ ಪದಾಧಿಕಾರಿಗಳು, ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ದಾಸೋಹವೆಂಬುದು ಕೇವಲ ಅನ್ನ ನೀಡುವ ಕಾರ್ಯವಲ್ಲ; ಅದು ಹಸಿದವರ ಹೃದಯಕ್ಕೆ ತಲುಪುವ ಮಾನವೀಯತೆಯ ಮಹಾಸೇವೆ



ಕೊಪ್ಪಳದ ಪವಿತ್ರ ನೆಲದಲ್ಲಿ ಭಕ್ತಿ, ಭಾವೈಕ್ಯತೆ, ಕಾಯಕ ಮತ್ತು ದಾಸೋಹದ ಪರಂಪರೆಯನ್ನು ಜಗತ್ತಿಗೆ ಸಾರುತ್ತಿರುವ ಗವಿಮಠದ ಜಾತ್ರಾ ಮಹೋತ್ಸವವೆಂದರೆ ಅದೊಂದು ಸಾಮಾನ್ಯ ಧಾರ್ಮಿಕ ಉತ್ಸವವಲ್ಲ. ಅದು ಲಕ್ಷಾಂತರ ಭಕ್ತರ ನಂಬಿಕೆಯ ಸಂಗಮ, ಮಾನವೀಯ ಮೌಲ್ಯಗಳ ಮಹಾಪರ್ವ ಹಾಗೂ ಅನ್ನದಾಸೋಹದ ಮೂಲಕ ಸೇವೆಯ ಸಾರ್ಥಕತೆಯನ್ನು ಸಾರುವ ಪುಣ್ಯಕ್ಷೇತ್ರದ ಮಹಾಸಂಭ್ರಮ.

ಪ್ರತಿವರ್ಷದಂತೆ 2027ನೇ ಸಾಲಿನ ಗವಿಮಠದ ಜಾತ್ರಾ ಮಹೋತ್ಸವದ ಸಿದ್ಧತೆಗಳು ಈಗಾಗಲೇ ಆರಂಭಗೊಂಡಿವೆ. ಜಾತ್ರೆಯ ದಿನಗಳಲ್ಲಿ ನಾಡಿನ ಮೂಲೆಮೂಲೆಗಳಿಂದ ಭಕ್ತಸಾಗರವೇ ಗವಿಮಠದತ್ತ ಹರಿದುಬರುತ್ತದೆ. ಬರುವ ಪ್ರತಿಯೊಬ್ಬ ಭಕ್ತನಿಗೂ ಅನ್ನ, ಆತಿಥ್ಯ ಹಾಗೂ ಆತ್ಮೀಯತೆಯ ಸೇವೆ ದೊರೆಯಬೇಕೆಂಬ ಮಹತ್ತರ ಸಂಕಲ್ಪದೊಂದಿಗೆ ದಾಸೋಹದ ಸಿದ್ಧತೆಗಳು ನಡೆಯುತ್ತಿವೆ.

ಈ ಸಿದ್ಧತೆಯ ನಡುವೆ ಕಂಡುಬರುವ ಒಂದು ದೃಶ್ಯ ಮಾತ್ರ ಪ್ರತಿಯೊಬ್ಬರ ಮನಸ್ಸನ್ನೂ ಆಳವಾಗಿ ಸ್ಪರ್ಶಿಸುತ್ತದೆ. ಲಕ್ಷಾಂತರ ಭಕ್ತರಿಗೆ ಅನ್ನದಾಸೋಹದ ವ್ಯವಸ್ಥೆ ಮಾಡುವ ಪೂಜ್ಯ ಗವಿಮಠದ ಶ್ರೀಗಳೇ ಸ್ವತಃ ತಮ್ಮ ಹೆಗಲ ಮೇಲೆ ಕಟ್ಟಿಗೆಯನ್ನು ಹೊತ್ತು ಸಾಗುತ್ತಿರುವ ದೃಶ್ಯ!

ನೋಡಲು ಇದು ಕೇವಲ ಕಟ್ಟಿಗೆಯನ್ನು ಹೊತ್ತು ಸಾಗುವ ಒಂದು ಕ್ಷಣವಾಗಿರಬಹುದು. ಆದರೆ ಅದರ ಹಿಂದಿರುವ ಭಾವನೆ, ಕಾಳಜಿ ಮತ್ತು ಸೇವಾ ಸಂಕಲ್ಪವನ್ನು ಅರ್ಥಮಾಡಿಕೊಂಡಾಗ ಅದರ ಮಹತ್ವ ಅಪಾರವಾಗಿ ಗೋಚರಿಸುತ್ತದೆ.

ಒಂದು ಕಡೆ ಭಕ್ತರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಮತ್ತೊಂದು ಕಡೆ ಪ್ರತಿಯೊಬ್ಬ ಭಕ್ತನಿಗೂ ಯಾವುದೇ ಕೊರತೆಯಾಗದಂತೆ ಅನ್ನದಾಸೋಹ ನಡೆಯಬೇಕೆಂಬ ಕಾಳಜಿ ಶ್ರೀಗಳ ಮನಸ್ಸಿನಲ್ಲಿದೆ. ಸಾವಿರಾರು ಒಲೆಗಳು ಉರಿಯಬೇಕಾದರೆ ಅದಕ್ಕೆ ಬೇಕಾಗುವ ಕಟ್ಟಿಗೆ, ಆಹಾರ ಪದಾರ್ಥಗಳು, ಅಡುಗೆ ಸಿದ್ಧತೆಗಳು, ಸ್ವಯಂಸೇವಕರ ಪರಿಶ್ರಮ ಹೀಗೆ ಪ್ರತಿಯೊಂದು ಕಾರ್ಯದ ಹಿಂದೆಯೂ ಶ್ರೀಗಳ ದೂರದೃಷ್ಟಿ ಮತ್ತು ಮುಂಚಿತವಾದ ಯೋಜನೆ ಅಡಗಿದೆ.

ಶ್ರೀಗಳ ಹೆಗಲ ಮೇಲೆ ಕಾಣುತ್ತಿರುವುದು ಕಟ್ಟಿಗೆಯ ಹೊರೆಯಾದರೂ, ಅವರ ಹೃದಯದಲ್ಲಿ ಹೊತ್ತಿರುವುದು ಲಕ್ಷಾಂತರ ಭಕ್ತರ ಹಸಿವು ನೀಗಿಸುವ ಮಹತ್ತರ ಜವಾಬ್ದಾರಿ. ನಿಜವಾದ ಮಹಾತ್ಮರು ಕೇವಲ ಉಪದೇಶ ಮಾಡುವುದಿಲ್ಲ; ತಮ್ಮ ಬದುಕಿನ ಪ್ರತಿಯೊಂದು ನಡೆಯಲ್ಲಿಯೂ ಆದರ್ಶವನ್ನು ತೋರಿಸುತ್ತಾರೆ ಎಂಬುದಕ್ಕೆ ಈ ದೃಶ್ಯವೇ ಜೀವಂತ ಉದಾಹರಣೆ.

ಸೇವೆಗೆ ಸ್ಥಾನಮಾನದ ಹಂಗಿಲ್ಲ, ದಾಸೋಹಕ್ಕೆ ಆಡಂಬರದ ಅವಶ್ಯಕತೆಯಿಲ್ಲ, ಮಾನವೀಯತೆಗೆ ಅಧಿಕಾರದ ಮಿತಿಯಿಲ್ಲ ಎಂಬ ಸಂದೇಶವನ್ನು ಪೂಜ್ಯ ಶ್ರೀಗಳು ತಮ್ಮ ಸರಳ ನಡೆ ಮತ್ತು ಕಾಯಕದ ಮೂಲಕ ಸಾರುತ್ತಿದ್ದಾರೆ.

ಇಲ್ಲಿ ಶ್ರೀಗಳ ಸರಳತೆಯನ್ನು ಮೆಚ್ಚುವುದಷ್ಟೇ ಮುಖ್ಯವಲ್ಲ; ಅದರ ಹಿಂದಿರುವ ವಿಶಾಲ ಹೃದಯವನ್ನು ಅರ್ಥಮಾಡಿಕೊಳ್ಳುವುದು ಇನ್ನೂ ಮುಖ್ಯ. ತಾವು ಕುಳಿತುಕೊಂಡು ಮಾಡಿಸಬಹುದಾದ ಕೆಲಸವನ್ನು ಸ್ವತಃ ಮುಂದೆ ನಿಂತು ಮಾಡುವ ಮನೋಭಾವ, ಪ್ರತಿಯೊಂದು ಸಿದ್ಧತೆಯನ್ನೂ ತಮ್ಮದೇ ಜವಾಬ್ದಾರಿಯೆಂದು ಭಾವಿಸುವ ಗುಣ, ಭಕ್ತರ ಸೇವೆಯಲ್ಲಿಯೇ ಭಗವಂತನನ್ನು ಕಾಣುವ ದೃಷ್ಟಿಕೋನ ಇವೆಲ್ಲವೂ ನಿಜವಾದ ಗುರುಪರಂಪರೆಯ ಶ್ರೇಷ್ಠ ಮೌಲ್ಯಗಳಾಗಿವೆ.

ಗವಿಮಠದ ಜಾತ್ರೆಗೆ ಬರುವ ಭಕ್ತರಿಗೆ ಇಲ್ಲಿ ಜಾತಿ, ಧರ್ಮ, ಭಾಷೆ, ಬಡವ, ಶ್ರೀಮಂತ ಎಂಬ ಯಾವುದೇ ಭೇದವಿಲ್ಲ. ಎಲ್ಲರಿಗೂ ಒಂದೇ ರೀತಿಯ ಅನ್ನ, ಒಂದೇ ರೀತಿಯ ಆತ್ಮೀಯತೆ ಮತ್ತು ಒಂದೇ ರೀತಿಯ ಗೌರವ. ಇದೇ ದಾಸೋಹದ ನಿಜವಾದ ತತ್ವ. ಇದೇ ಬಸವಣ್ಣನವರ ಕಾಯಕ ಮತ್ತು ದಾಸೋಹದ ಆಶಯವನ್ನು ನೆನಪಿಸುವ ಮಾನವೀಯ ಸಂದೇಶ.

ವರ್ಷದಿಂದ ವರ್ಷಕ್ಕೆ ಭಕ್ತಸಾಗರ ಹೆಚ್ಚಾಗುತ್ತಿದ್ದರೂ, ದಾಸೋಹದ ಸೇವಾ ಮನೋಭಾವ ಮಾತ್ರ ಇನ್ನಷ್ಟು ವಿಶಾಲವಾಗುತ್ತಿದೆ. ಈ ಮಹಾಸೇವೆಯ ಹಿಂದೆ ಅನೇಕ ಭಕ್ತರ ಸಹಕಾರ, ಸ್ವಯಂಸೇವಕರ ಪರಿಶ್ರಮ ಮತ್ತು ಶ್ರೀಗಳ ಮಾರ್ಗದರ್ಶನ ಒಂದಾಗಿ ಬೆರೆತಿವೆ.

ನನ್ನ ದೃಷ್ಟಿಯಲ್ಲಿ ಈ ಒಂದು ಚಿತ್ರ ಸಾವಿರಾರು ಮಾತುಗಳಿಗಿಂತ ಹೆಚ್ಚಿನ ಸಂದೇಶವನ್ನು ನೀಡುತ್ತದೆ. ಏಕೆಂದರೆ ಇಲ್ಲಿ ಕಾಣುವುದು ಕೇವಲ ಒಬ್ಬ ಶ್ರೀಗಳ ಚಿತ್ರವಲ್ಲ; ಸೇವೆಯೇ ಸಾಧನೆ, ಕಾಯಕವೇ ಕೈಲಾಸ, ಹಸಿದವರಿಗೆ ಅನ್ನ ನೀಡುವುದೇ ಪರಮಧರ್ಮ ಎಂಬ ತತ್ವದ ಪ್ರತಿಬಿಂಬ.

ಒಂದು ಕ್ಷಣ ಯೋಚಿಸಿ: ದೇವರ ದರ್ಶನಕ್ಕಾಗಿ ಲಕ್ಷಾಂತರ ಭಕ್ತರು ಮಠಕ್ಕೆ ಬರುತ್ತಾರೆ. ಆದರೆ ಆ ಭಕ್ತರ ಹಸಿವು ನೀಗಿಸಲು ದೇವರ ಸೇವಕನಂತೆ ಸ್ವತಃ ಕಟ್ಟಿಗೆ ಹೊತ್ತು ಸಾಗುವ ಶ್ರೀಗಳ ಮನಸ್ಸಿನಲ್ಲಿರುವ ಭಕ್ತಿ ಎಷ್ಟೊಂದು ವಿಶಾಲವಾಗಿರಬಹುದು!

ಇಂತಹ ದೃಶ್ಯಗಳು ಕೇವಲ ಛಾಯಾಚಿತ್ರಗಳಾಗಿ ಉಳಿಯಬಾರದು; ನಮ್ಮ ಬದುಕಿನ ಆದರ್ಶಗಳಾಗಿ ಮೂಡಿಬರಬೇಕು. ಸೇವೆ ಮಾಡಲು ದೊಡ್ಡ ಸ್ಥಾನಮಾನ ಬೇಕಿಲ್ಲ, ದೊಡ್ಡ ಮನಸ್ಸಿದ್ದರೆ ಸಾಕು ಎಂಬುದನ್ನು ಮುಂದಿನ ಪೀಳಿಗೆಗೆ ತಿಳಿಸುವಂತಹ ಅಪರೂಪದ ಕ್ಷಣಗಳಿವು.

ಪೂಜ್ಯ ಶ್ರೀಗಳ ಇಂತಹ ಸೇವಾ ಸಂಕಲ್ಪಕ್ಕೆ, ದಾಸೋಹದ ಕಾಳಜಿಗೆ, ಸರಳತೆಗೆ ಮತ್ತು ಮಾನವೀಯ ಮೌಲ್ಯಗಳಿಗೆ ನನ್ನ ಹೃತ್ಪೂರ್ವಕ ಶರಣು ಶರಣಾರ್ಥಿಗಳು.

ಗವಿಮಠದ ಈ ಮಹಾದಾಸೋಹ ಪರಂಪರೆ ಯುಗಯುಗಾಂತರಗಳವರೆಗೆ ಹೀಗೆ ಮುಂದುವರಿಯಲಿ. 2027ನೇ ಸಾಲಿನ ಜಾತ್ರಾ ಮಹೋತ್ಸವವು ಭಕ್ತಿ, ಶ್ರದ್ಧೆ, ಸೇವೆ ಮತ್ತು ಸಮರ್ಪಣೆಯ ಹೊಸ ಇತಿಹಾಸವನ್ನು ನಿರ್ಮಿಸಲಿ. ನಾಡಿನ ಎಲ್ಲ ಭಕ್ತರಿಗೂ ಶ್ರೀ ಗವಿಸಿದ್ಧೇಶ್ವರ ಸ್ವಾಮಿಗಳ ಆಶೀರ್ವಾದ ಸದಾ ಇರಲಿ ಎಂದು ಹಾರೈಸುತ್ತೇನೆ.

ಶರಣು ಶರಣಾರ್ಥಿಗಳು ಜೈ ಗವಿಸಿದ್ಧೇಶ್ವರ!



ಶಂಕರ್ ಚಾಗಿ
ಪ್ರಥಮ ದರ್ಜೆ ಸಹಾಯಕರು ಜಿಲ್ಲಾ ವಿಮಾ ಇಲಾಖೆ, ಕೊಪ್ಪಳ.

ಅಂಬಾ ಮಠದ ಬಗ್ಗೆ ತಪ್ಪು ಮಾಹಿತಿ ಹರಡಬೇಡಿ: ಚಿನ್ನಪ್ಪ ದೊಡ್ಡಮನಿ



ಮದರ್‌ಕಲ್, ನ. 8: ಮದರ್‌ಕಲ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ದೈವದ ಭಕ್ತರ ಒಗ್ಗಟ್ಟು ಮತ್ತು ಸಹಕಾರದಿಂದ ಅಂಬಾ ಮಠವನ್ನು ಸ್ಥಾಪಿಸಲಾಗಿದ್ದು, ಮಠದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮಠದ ಕಾರ್ಯಚಟುವಟಿಕೆಗಳ ಬಗ್ಗೆ ಸಮರ್ಪಕ ಮಾಹಿತಿ ಪಡೆಯದೆ ಹೊರಗಿನ ಕೆಲವು ಸಂಘ-ಸಂಸ್ಥೆಗಳು ಹಾಗೂ ವ್ಯಕ್ತಿಗಳು ಆರೋಪ ಮಾಡುತ್ತಿರುವುದು ಸರಿಯಲ್ಲ ಎಂದು ಗ್ರಾಮದ ಹಿರಿಯ ಮುಖಂಡ ಚಿನ್ನಪ್ಪ ದೊಡ್ಡಮನಿ ಹೇಳಿದರು.

ನ. 7ರಂದು ಅಂಬಾ ಮಠದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮದ ದೈವದ ಭಕ್ತರೆಲ್ಲರೂ ಒಗ್ಗೂಡಿ ಮಠದಲ್ಲಿ ಅಂಬಾ ದೇವಿಯ ಪ್ರತಿಷ್ಠಾಪನೆ ನೆರವೇರಿಸಿದ್ದಾರೆ. ಭಕ್ತರ ದೇಣಿಗೆ ಹಾಗೂ ಸಹಕಾರದಿಂದ ನೂತನ ತೇರು ನಿರ್ಮಿಸಲಾಗಿದ್ದು, ಮಹಿಳೆಯರು ತೇರು ಎಳೆಯುವ ರಥೋತ್ಸವವನ್ನೂ ನಡೆಸಲಾಗುತ್ತಿದೆ. ಇದಲ್ಲದೆ, ಸಾಮೂಹಿಕ ವಿವಾಹ, ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮ, ಪ್ರತಿ ಹುಣ್ಣಿಮೆಯಂದು ಅನುಭಾವ ಕಾರ್ಯಕ್ರಮ ಹಾಗೂ ಮೂಢನಂಬಿಕೆಗಳ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯಗಳನ್ನು ಮಠದ ವತಿಯಿಂದ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಮಠದ ಅಭಿವೃದ್ಧಿ ಹಾಗೂ ಧಾರ್ಮಿಕ ಚಟುವಟಿಕೆಗಳು ಸಂಪೂರ್ಣವಾಗಿ ಭಕ್ತರ ಸಹಕಾರದಿಂದ ನಡೆಯುತ್ತಿವೆ. ಮಠವು ಯಾವುದೇ ಒಬ್ಬ ವ್ಯಕ್ತಿಗೆ ಸೀಮಿತವಾಗಿಲ್ಲ. ಗ್ರಾಮದ ಹಾಗೂ ಸುತ್ತಮುತ್ತಲಿನ ಭಕ್ತರ ಶ್ರದ್ಧೆ ಮತ್ತು ಒಗ್ಗಟ್ಟಿನಿಂದ ಧಾರ್ಮಿಕ ಹಾಗೂ ಸಮಾಜಮುಖಿ ಕಾರ್ಯಗಳು ನಡೆಯುತ್ತಿವೆ ಎಂದು ವಿವರಿಸಿದರು.

ಅಂಬಾ ಮಠದ ತಾತನವರಾದ ನಾಮದೇವ ಗೌಡ ಶರಣರನ್ನು ಮದರ್‌ಕಲ್ ಗ್ರಾಮದ ಭಕ್ತರೇ ಗೌರವಪೂರ್ವಕವಾಗಿ ಕರೆತಂದು ಮಠದಲ್ಲಿ ಇರಿಸಿದ್ದಾರೆ. ಶರಣರ ವಚನಗಳು ಹಾಗೂ ಧಾರ್ಮಿಕ ಸಂದೇಶಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಅವರು ಮಠದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಕಾರ್ಯವೈಖರಿಯಲ್ಲಿ ಯಾವುದೇ ತಪ್ಪು ಕಂಡುಬಂದರೆ ಅವರನ್ನು ಕರೆತಂದ ಗ್ರಾಮದ ದೈವದ ಭಕ್ತರೇ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುತ್ತಾರೆ. ಹೀಗಿರುವಾಗ ಮಠದ ವಾಸ್ತವ ಪರಿಸ್ಥಿತಿ ಅರಿಯದೆ ಹೊರಗಿನವರು ಆರೋಪ ಮಾಡುವುದು ಸಮಂಜಸವಲ್ಲ ಎಂದು ಹೇಳಿದರು.

ಮಠ ಸ್ಥಾಪನೆಯಾಗಿರುವ ಪ್ರದೇಶದಲ್ಲಿ ಒಟ್ಟು 12 ಎಕರೆ ಸರ್ಕಾರಿ ಜಮೀನಿದ್ದು, ಈ ಪೈಕಿ ಎರಡು ಎಕರೆ ಜಮೀನನ್ನು ಮಠದ ಟ್ರಸ್ಟ್‌ಗೆ ಮಂಜೂರು ಮಾಡುವಂತೆ ಪಲಕನಮರಡಿ ಗ್ರಾಮ ಪಂಚಾಯಿತಿಯ ಸರ್ವಸದಸ್ಯರು ಸರ್ವಾನುಮತದಿಂದ ನಿರ್ಣಯ ಕೈಗೊಂಡಿದ್ದಾರೆ. ಈ ಸಂಬಂಧ ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಠರಾವು ಅಂಗೀಕರಿಸಲಾಗಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯರಾದ ಮಾನಯ್ಯ ನಾಯಕ ಹಾಗೂ ಅಲಿಸಾಬು ಮದರ್‌ಕಲ್ ಮಾಹಿತಿ ನೀಡಿದರು.

ಮಠದ ಅಭಿವೃದ್ಧಿ ಕಾರ್ಯಗಳು ಭಕ್ತರ ಸಹಕಾರದಿಂದ ನಡೆಯುತ್ತಿದ್ದು, ಮಠದ ಹೆಸರಿನಲ್ಲಿ ಮಾಡಲಾಗುತ್ತಿರುವ ಆರೋಪಗಳು ಸತ್ಯಕ್ಕೆ ದೂರವಾಗಿವೆ. ಮಠದ ಕುರಿತು ಯಾವುದೇ ಹೇಳಿಕೆ ನೀಡುವ ಮೊದಲು ವಾಸ್ತವಾಂಶಗಳನ್ನು ತಿಳಿದುಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಮದರ್‌ಕಲ್ ಗ್ರಾಮದ ಹಿರಿಯ ಮುಖಂಡ ದೇವಣ್ಣ ಮಾಲಿ ಪಾಟೀಲ್ ಮಾತನಾಡಿ, ಅಂಬಾ ಮಠವು ಮದರ್‌ಕಲ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ದೈವದ ಭಕ್ತರಿಗೆ ಸೇರಿದ ಮಠವಾಗಿದೆ. ಇಲ್ಲಿ ಯಾವುದೇ ವ್ಯಕ್ತಿಯ ವೈಯಕ್ತಿಕ ಇಚ್ಛೆಯಂತೆ ಕಾರ್ಯಚಟುವಟಿಕೆಗಳು ನಡೆಯುವುದಿಲ್ಲ. ದೈವದ ಇಚ್ಛೆ ಹಾಗೂ ಭಕ್ತರ ಒಗ್ಗಟ್ಟಿನೊಂದಿಗೆ ಧಾರ್ಮಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಜನರ ಕಲ್ಯಾಣವೇ ಮಠದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ನಾಮದೇವ ಗೌಡ ಶರಣರು ಮಠಕ್ಕೆ ಆಗಮಿಸಿದ ನಂತರ ಜಾತಿ ಭೇದವಿಲ್ಲದೆ ಎಲ್ಲರನ್ನೂ ಒಗ್ಗೂಡಿಸಿಕೊಂಡು ಗ್ರಾಮದ ಒಳಿತಿಗಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಕುರಿತು ಸರಿಯಾದ ಮಾಹಿತಿ ಪಡೆಯದೆ ಸಾರ್ವಜನಿಕರಲ್ಲಿ ತಪ್ಪು ಸಂದೇಶ ಹರಡುವುದು ಸರಿಯಲ್ಲ ಎಂದು ಹೇಳಿದರು.

ಹುಸೇನಸಾಬು ಟೆಂಟ್‌ಹೌಸ್ ಮಾತನಾಡಿ, ಅಂಬಾ ಮಠವನ್ನು ಗ್ರಾಮದ ದೈವದ ಭಕ್ತರೆಲ್ಲರೂ ಒಗ್ಗೂಡಿ ಸ್ಥಾಪಿಸಿದ್ದಾರೆ. ನಾಮದೇವ ಗೌಡ ಶರಣರ ಬಗ್ಗೆ ಗ್ರಾಮಸ್ಥರಲ್ಲಿ ಉತ್ತಮ ಅಭಿಪ್ರಾಯವಿದ್ದು, ಅವರ ಕಾರ್ಯಗಳ ಕುರಿತು ವಾಸ್ತವಾಂಶ ತಿಳಿದುಕೊಳ್ಳದೆ ಹೊರಗಿನವರು ತಪ್ಪು ಸಂದೇಶ ನೀಡಬಾರದು ಎಂದು ಮನವಿ ಮಾಡಿದರು.

ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಬಸವರಾಜ್ ಹೊಸೂರು ಮಾತನಾಡಿ, ಅಂಬಾ ಮಠದಲ್ಲಿ ನಾಮದೇವ ಗೌಡ ಶರಣರ ನೇತೃತ್ವದಲ್ಲಿ ಉತ್ತಮ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳು ನಡೆಯುತ್ತಿವೆ. ಮಠದ ಮೂಲಕ ಜನರಲ್ಲಿ ಧಾರ್ಮಿಕ ಜಾಗೃತಿ ಹಾಗೂ ಸಾಮಾಜಿಕ ಸಾಮರಸ್ಯ ಮೂಡಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.

ಗ್ರಾಮದ ಹಿರಿಯರಾದ ದುರ್ಗಪ್ಪ ಮಾತನಾಡಿ, ನಾಮದೇವ ಗೌಡ ಶರಣರನ್ನು ಗ್ರಾಮದ ಭಕ್ತರೇ ಗೌರವದಿಂದ ಮಠಕ್ಕೆ ಕರೆತಂದು ಶರಣರ ಸ್ಥಾನದಲ್ಲಿ ಕೂರಿಸಿದ್ದಾರೆ. ಅವರು ಜನರಿಗೆ ಉತ್ತಮ ಸಂದೇಶಗಳನ್ನು ನೀಡುತ್ತಿದ್ದು, ಅವರ ಬಗ್ಗೆ ಗ್ರಾಮಸ್ಥರು ಗೌರವ ಮತ್ತು ಅಭಿಮಾನ ಹೊಂದಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಚಿನ್ನಪ್ಪ ದೊಡ್ಡಮನಿ, ದೇವಣ್ಣ ಮಾಲಿ ಪಾಟೀಲ್, ಸಾಹೇಬ್ ಗೌಡ ಪೊಲೀಸ್ ಪಾಟೀಲ್, ಶರಣಪ್ಪ ಮಾಲಿ ಪಾಟೀಲ್, ಮಾನಯ್ಯ, ಅಲಿಸಾಬ್, ರಾಮಣ್ಣ ಉಪ್ಪಾರ್, ಬಸವರಾಜ್ ಹೊಸೂರು, ಹನುಮಂತ ಬಡಿಗೇರ್, ಮುದ್ದಣ್ಣ, ತಿಪ್ಪಣ್ಣ, ರವಿ, ಶಿವಗೇನಿ, ಶರಣಪ್ಪ ಹೊಸಮನಿ, ಚನ್ನಬಸವ ದೊಡ್ಡಮನಿ, ರಂಗಪ್ಪ ಮಲ್ಲಪ್ಪ ಅಸರತಿ, ನಿಂಗಪ್ಪ ಬಾಗೂರು, ದಾವಲ್‌ಸಾಬ್, ಬಸವರಾಜ್ ಮಾತ್ಪಳ್ಳಿ, ಶಿವಣ್ಣ ಉಪ್ಪಾರ್, ಗಣೇಶ್ ಬಾಂಬೆ, ಹುಸೇನ್ ಬಾಷಾ ಸೇರಿದಂತೆ ಮದರ್‌ಕಲ್ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿವಿಧ ಸಮಾಜಗಳ ಹಿರಿಯರು, ಮುಖಂಡರು ಮತ್ತು ಅಂಬಾ ಮಠದ ಭಕ್ತರು ಉಪಸ್ಥಿತರಿದ್ದರು.

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು

ಕಷ್ಟಗಳು ಕರಗಲಿ,
ಖುಷಿಯ ಬೆಳಕು ಮನೆ ತುಂಬಲಿ,
ನೋವು ದೂರವಾಗಲಿ,
ನೆಮ್ಮದಿ ನೆಲೆಗೊಳ್ಳಲಿ.

ದೀಪಾವಳಿಯ ದೀಪಗಳ ಪ್ರಭೆ
ಬದುಕಿನ ಅಂಧಕಾರವನ್ನು
ಹೊಡೆದೋಡಿಸಿ ಹೊಸ
ಬೆಳಕು–ಚೈತನ್ಯ–ಭರವಸೆ ನಮ್ಮೆಲ್ಲರ
ಬಾಳಿನಲ್ಲಿ ತರಲಿ ಎಂದು ಆಶಿಸುತ್ತೇವೆ.

ಪಾಂಡು ಪವರ್
ಪ್ರಥಮ ದರ್ಜೆಗುತ್ತಿಗೆದಾರರು

ಗೋವಿಂದ್ ಪವರ್
ಪ್ರಥಮ ದರ್ಜೆಗುತ್ತಿಗೆದಾರರು

ಬಾಲಾಜಿ ಕನ್ಸ್ಟ್ರಕ್ಷನ್ಸ್, ಬಾಲಾಜಿ ಸ್ಟೋನ್‌ಕ್ರಷರ್
ರಾಯಚೂರು ರೋಡ್, ಮಾನವಿ

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು



ಶ್ರೀ ಸುಧೀರ್ ವಿಭೂತಿ
ಪಂಚಾಯತ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯತ ಗುಂಡ

ಶ್ರೀ ಯಂಕಪ್ಪ ಬಿ ಕ್ಷತ್ರಿ
ಆಡಳಿತಾಧಿಕಾರಿ ಗ್ರಾಮ ಪಂಚಾಯತ ಗುಂಡ

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು



ಶ್ರೀ ರಮೇಶ
ಪಂಚಾಯತ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತ ತಲೇಖಾನ



ಶ್ರೀ ಪ್ರಭು ಡಿ ಹುನಗುಂದ
ಆಡಳಿತಾಧಿಕಾರಿ ಗ್ರಾಮ ಪಂಚಾಯತ ತಲೇಖಾನ

ಸರ್ವ ಸಿಬ್ಬಂದಿ ವರ್ಗ ಗ್ರಾಮ ಪಂಚಾಯತಿ ಕಾರ್ಯಾಲಯ ತಲೇಖಾನ ತಾ.ಮಸ್ಕಿ ಜಿ.ರಾಯಚೂರು.

ಶ್ರೀ ಶರಣು ಗೊರೆಬಾಳ್



ಪ್ರಧಾನ ಮಂತ್ರಿ ಭಾರತೀಯ ಜನ ಔಷಧಿ ಪರಿಯೋಜನಾ

ಪ್ರಧಾನ ಮಂತ್ರಿ
ಭಾರತೀಯ ಜನ ಔಷಧಿ ಕೇಂದ್ರ
ಸಿಂಧನೂರು

ಅಡಿಯಲ್ಲಿ :
ಭಾರತ ಸರ್ಕಾರದ
ರಾಸಾಯನಗಳು ಮತ್ತು ರಸಗೊಬ್ಬರಗಳು
ಇಲಾಖೆ

ಭಾರತೀಯ ಜನಔಷಧಿ
ಪ್ರಚಾರ ಬ್ಯಾಡೋ
(ಬವಿಬಿಪ)





ದೀಪಾವಳಿ
ಹಬ್ಬದ ಹಾರ್ದಿಕ ಶುಭಾಶಯಗಳು

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು





ಶ್ರೀ ಮಹಾಂತೇಶ
ಪಂಚಾಯತ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತ ಉಮಲೂಟಿ



ಶ್ರೀ ಅಶೋಕ್ ಎಂ
ಆಡಳಿತಾಧಿಕಾರಿ ಗ್ರಾಮ ಪಂಚಾಯತ ಉಮಲೂಟಿ

ಸರ್ವ ಸಿಬ್ಬಂದಿ ವರ್ಗ ಗ್ರಾಮ ಪಂಚಾಯತಿ ಕಾರ್ಯಾಲಯ ಉಮಲೂಟಿ ತಾ.ಸಿಂಧನೂರು ಜಿ.ರಾಯಚೂರು.

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು



ಶ್ರೀ ಹುಚ್ಚಪ್ಪ ನೇಗಲಿ
ಪಂಚಾಯತ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತ ಕಲಮಂಗಿ

ಶ್ರೀ ಅಶೋಕ್ ಎಂ
ಆಡಳಿತಾಧಿಕಾರಿ ಗ್ರಾಮ ಪಂಚಾಯತ ಕಲಮಂಗಿ.

ಸರ್ವ ಸಿಬ್ಬಂದಿ ವರ್ಗ ಗ್ರಾಮ ಪಂಚಾಯತಿ ಕಾರ್ಯಾಲಯ ಕಲಮಂಗಿ ತಾ.ಸಿಂಧನೂರು, ಜಿ.ರಾಯಚೂರು.

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು



ಶ್ರೀ ಆಂಜನೇಯ ನಾಯಕ ಹಿರೇಬೇರ್ಗಿ
ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಕಲ್ಮಂಗಿ



ದೀಪಾವಳಿ
ಹಬ್ಬದ ಹಾರ್ದಿಕ ಶುಭಾಶಯಗಳು

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು

ಶ್ರೀ ಶರಣಪ್ಪ ಹೊಸ ಗೌಡ್ರು
ಅಧ್ಯಕ್ಷರು



ಶ್ರೀ ನರಸ್ ರೆಡ್ಡಿ
ಮುಖ್ಯ ಅಧಿಕಾರಿ ಪಟ್ಟಣ ಪಂಚಾಯಿತಿ
ತುರುವಿಹಾಳ



ಶ್ರೀಮತಿ ಲಕ್ಷ್ಮಿ ಗಂಡ
ಸೋಮನಾಥ ಮಾಟುರ್
ಉಪಾಧ್ಯಕ್ಷರು

ಪಟ್ಟಣ ಪಂಚಾಯಿತಿ ಸರ್ವ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಪಟ್ಟಣ ಪಂಚಾಯತಿ ಕಾರ್ಯಾಲಯ, ತುರ್ವಿಹಾಳ, ತಾ.ಸಿಂಧನೂರು ಜಿ.ರಾಯಚೂರು.

ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು



ಜ್ಯೋತಿಬಾಯಿ ಟಿ.
ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ತಿಡಿಗೋಳ



ಪಾರ್ವತಮ್ಮ ಗಂಡ ಹುಲ್ಲೇಶ್
ಅಧ್ಯಕ್ಷರು



ಶಾರದ ಗಂಡ ಶಂಕ್ರಪ್ಪ
ಉಪಾಧ್ಯಕ್ಷರು

ಸರ್ವ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಗ್ರಾಮ ಪಂಚಾಯತಿ ಕಾರ್ಯಾಲಯ ತಿಡಿಗೋಳ ತಾ.ಸಿಂಧನೂರು ಜಿ.ರಾಯಚೂರು.



ದೀಪಾವಳಿ
ಹಬ್ಬದ ಹಾರ್ದಿಕ ಶುಭಾಶಯಗಳು

ಶ್ರೀಮತಿ ಭೇಗಂ ಗಂಡ ಶಾಮೀದ ಸಾಬ್ ಹವಾಲ್ದಾರ್ ಉಮಲೂಟಿ
ಅಧ್ಯಕ್ಷರು
ಮಸ್ಕಿ ಗ್ರಾಮೀಣ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕ

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K